<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

<u>ಸಿ.ಸಿ. ಸಂಖ್ಯೆ **1076/2024**</u>

<u>ಪಿರ್ಯಾದಿ</u> : ಶ್ರೀ ಪಿ.ಎ. ವಿರೇಂದ್ರ ಹೆಗ್ಗಡೆ,
ವಯಸ್ಸು ಸುಮಾರು 44 ವರ್ಷ,
ಬಿನ್ ಪದ್ಮರಾಜ್ ಹೆಗ್ಗಡೆ,
ವಾಸಃ ಹಾಲಿಮನೆ, ಅಡಕೋಡು,
ಹೊರನಾಡು ಅಂಚೆ ಮತ್ತು ಗ್ರಾಮ,
ಕಳಸ ತಾಲ್ಲೂಕು.

ವಿರುದ್ಧ

<u>ಆರೋಪಿ</u> : ಶ್ರೀ ಅಬುಸಾಲಿ ಕೆ.ಎ.,
ವಯಸ್ಸು ಸುಮಾರು 53 ವರ್ಷ,
Prop: ಶ್ರೀ ಅನ್ನಪೂರ್ಣ ಮೋಟಾರ್ಸ್,
ಕಲ್ಮಕ್ಕಿ ಸಂಕೀರ್ಣ, ಕೊಪ್ಪ ರಸ್ತೆ,
ಬಾಳೆಹೊನ್ನೂರು, ಎನ್.ಆರ್.ಪುರ ತಾಲ್ಲೂಕು.

<u>ಆಪಾದನೆಯ ಸಾರಾಂಶ</u>

ಶ್ರೀ ವಿಶ್ವನಾಥ್ ಎ., C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರನ್ನು ಸಂಪರ್ಕಿಸಿ, ನಿಮ್ಮ ತುರ್ತು ಅವಶ್ಯಕತೆಗಳಿಗಾಗಿ ಪಿರ್ಯಾದುದಾರರಿಂದ 10,00,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕೆನರಾ ಬ್ಯಾಂಕ್, ಬಾಳೆಹೊನ್ನೂರು ಶಾಖೆಯ ಚೆಕ್ ಸಂಖ್ಯೆ 717089, ದಿನಾಂಕ 26.03.2024, ರೂ.10,00,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಕಳಸ ಶಾಖೆಗೆ ಜಮೆಗಾಗಿ ಸಲ್ಲಿಸಿದಾಗ, 'No Such Account' ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 27.04.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(*ದಿನಾಂಕ 06.11.2024 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ*,* ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು*.* ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ*)*

ಸಹಿ**/-**

ಮೂಡಿಗೆರೆ
ದಿನಾಂಕಃ 06.11.2024

C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ, ಮೂಡಿಗೆರೆ.**